**All India Radio: Bangalore**
**National Bulletin In Kannada**
**29.07.2026 1.10 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. ಲೋಕಸಭೆಯಲ್ಲಿ ಪ್ರಶ್ನೆಪತ್ರಿಕೆ ಸೋರಿಕೆ ತಿದ್ದುಪಡಿ ಮೂಸೂದೆ ಮೇಲೆ ಮುಂದುವರಿದ ಚರ್ಚೆ; ರಾಜ್ಯಸಭೆ ಕಲಾಪ ಮಧ್ಯಾಹ್ನ ೨ ಗಂಟೆವರೆಗೆ ಮುಂದೂಡಿಕೆ
2. ಇಂದು ಅಂತಾರಾಷ್ಟ್ರೀಯ ಹುಲಿ ದಿನ; ಹುಲಿ ರಕ್ಷಣೆಯಲ್ಲಿ ಭಾರತ ಜಾಗತಿಕ ನಾಯಕ; ಪ್ರಧಾನಿ ನರೇಂದ್ರ ಮೋದಿ
3. ಇಂದು ಗುರುಪೂರ್ಣಿಮೆ; ಬಿಜೆಪಿಯಿಂದ ಇಂದು ಶ್ರೀಗುರು ರವಿದಾಸ್ ಸಂಕಲ್ಪ ಅಭಿಯಾನಕ್ಕೆ ಚಾಲನೆ
4. ನೈಋತ್ಯ ಜಪಾನ್‌ನಲ್ಲಿ ಭೂಕಂಪ; ೧೩ ಮಂದಿ ಸಾವು
5. ವಿಶ್ವ ಜ್ಯೂನಿಯರ್ ಸ್ಕ್ವಾಷ್ ಚಾಂಪಿಯನ್‌ಶಿಪ್; ಸೆಮಿಫೈನಲ್ಸ್ ಪ್ರವೇಶಿಸಿದ ಪುರುಷ ಮತ್ತು ಮಹಿಳಾ ತಂಡಗಳು

<><><><>

ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಕುರಿತು ವಿದ್ಯಾರ್ಥಿಗಳ ಪ್ರತಿಭಟನೆಯ ಸಮಯದಲ್ಲಿ ಪೊಲೀಸ್ ಕ್ರಮದ ವಿರುದ್ಧ ಪ್ರತಿಪಕ್ಷಗಳು ಗದ್ದಲ ಎಬ್ಬಿಸಿದ ಹಿನ್ನೆಲೆಯಲ್ಲಿ ಸಂಸತ್ತಿನ ಉಭಯ ಸದನಗಳನ್ನು ಸ್ವಲ್ಪಕಾಲ ಮುಂದೂಡಲಾಗಿತ್ತು.

ಲೋಕಸಭೆಯಲ್ಲಿ ಬೆಳಿಗ್ಗೆ ಕಲಾಪ ಪ್ರಾರಂಭಿಸಿದಾಗ, ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರು ಗ್ಲಾಸ್ಗೋದಲ್ಲಿ ನಡೆದ ೨೩ನೇ ಕಾಮನ್‌ವೆಲ್ತ್ ಕ್ರೀಡಾಕೂಟದಲ್ಲಿ ಬೆಳ್ಳಿ ಪದಕಗಳನ್ನು ಗೆದ್ದ ವೇಟ್‌ಲಿಫ್ಟರ್ ಹರ್ಜಿಂದರ್ ಕೌರ್ ಮತ್ತು ಕ್ರೀಡಾಪಟು ಗುರ್ಲೀನ್ ಸಿಂಗ್ ಅವರನ್ನು ಅಭಿನಂದಿಸಿದರು. ರಾಷ್ಟ್ರದ ಹೆಮ್ಮೆಯನ್ನು ಹೆಚ್ಚಿಸಿದ್ದಕ್ಕಾಗಿ ಎಲ್ಲಾ ಆಟಗಾರರು ಮತ್ತು ಅವರ ತರಬೇತುದಾರರ ಪರಿಶ್ರಮವನ್ನು ಶ್ಲಾಘಿಸಿದರು. ಸ್ಪೀಕರ್ ಅವರು ಪ್ರಶ್ನೋತ್ತರ ಕಲಾಪವನ್ನು ಕೈಗೆತ್ತಿಕೊಳ್ಳಲು ಮುಂದಾದಾಗ ವಿದ್ಯಾರ್ಥಿಗಳ ಪ್ರತಿಭಟನೆಯ ಸಮಯದಲ್ಲಿ ಪೊಲೀಸರು ಬಲ

ಪ್ರಯೋಗಿಸಿದ್ದಾರೆ ಎಂದು ಆರೋಪಿಸಿ ವಿರೋಧ ಪಕ್ಷದ ಸದಸ್ಯರು ಘೋಷಣೆಗಳನ್ನು ಕೂಗಲು ಪ್ರಾರಂಭಿಸಿದರು. ಆಗ ಪ್ರಶ್ನೋತ್ತರ ಕಲಾಪ ಸದಸ್ಯರಿಗೆ ಸೇರಿದ್ದು, ಸರ್ಕಾರದಿಂದ ಉತ್ತರವನ್ನು ಪಡೆಯುವುದು ಸದಸ್ಯರಿಗೆ ಅತ್ಯಂತ ಮುಖ್ಯವಾದ ಕೆಲಸ. ಕೆಲವು ವಿರೋಧ ಪಕ್ಷದ ಸದಸ್ಯರು ಉದ್ದೇಶಪೂರ್ವಕವಾಗಿ ಪ್ರಶ್ನೋತ್ತರ ಕಲಾಪಕ್ಕೆ ಅಡ್ಡಿಪಡಿಸುತ್ತಿದ್ದಾರೆ, ಇದು ಸೂಕ್ತವಲ್ಲ. ಯೋಜಿತ ರೀತಿಯಲ್ಲಿ ಸದನದ ಕಲಾಪಕ್ಕೆ ಅಡ್ಡಿಪಡಿಸುವುದು ಸಂಸದೀಯ ಸಂಪ್ರದಾಯಗಳಿಗೆ ಅನುಗುಣವಾಗಿಲ್ಲ ಎಂದು ಅವರು ಹೇಳಿದರು. ಲೋಕಸಭೆ ಕಲಾಪವನ್ನು ಮಧ್ಯಾಹ್ನ ೧೨ ಗಂಟೆಯವರೆಗೆ ಮುಂದೂಡಲಾಗಿತ್ತು. ನಂತರ ಮತ್ತೆ ಸದನ ಸಮಾವೇಶಗೊಂಡಿದ್ದು, ಪ್ರಶ್ನೆಪತ್ರಿಕೆ ಸೋರಿಕೆ ಸಂಬಂಧಿಸಿದ ತಿದ್ದುಪಡಿ ಮಸೂದೆ ಬಗ್ಗೆ ಚರ್ಚೆ ಮುಂದುವರೆದಿದೆ.  ಮತ್ತೊಂದೆಡೆ ರಾಜ್ಯಸಭೆಯಲ್ಲೂ ಭಾರೀ ಗದ್ದಲ, ಕೋಲಾಹಲ ಉಂಟಾಯಿತು. ವಿದ್ಯಾರ್ಥಿಗಳ ಮೇಲಿನ ಕ್ರಮವನ್ನು ವಿಪಕ್ಷ ಸದಸ್ಯರು ವಿರೋಧಿಸಿದರು. ಸದನವನ್ನು ನಡೆಸಲು ಸಾಧ್ಯವಾಗ ಪರಿಸ್ಥಿತಿ ಹಿನ್ನೆಲೆಯಲ್ಲಿ ಕಲಾಪವನ್ನು ೧೨ ಗಂಟೆವರೆಗೆ ಮುಂದೂಡಲಾಯಿತು. ನಂತರ ಸದನ ಸೇರಿದ ಗದ್ದಲ ಮುಂದುವರಿಯಿತು. ಆಗ ಕಲಾಪವನ್ನು ಮಧ್ಯಾಹ್ನ ೨ ಗಂಟೆಯವರೆಗೆ ಮುಂದೂಡಲಾಯಿತು.

<><><><>

ಹುಲಿ ಸಂರಕ್ಷಣೆ, ನೈಸರ್ಗಿಕ ಆವಾಸಸ್ಥಾನಗಳ ರಕ್ಷಣೆ ಹಾಗೂ ಕಾಡು ಹುಲಿಗಳ ಸಂಖ್ಯೆ ಕುಸಿತದ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಅಂತಾರಾಷ್ಟ್ರೀಯ ಹುಲಿ ದಿನವನ್ನು ಇಂದು ವಿಶ್ವದಾದ್ಯಂತ ಆಚರಿಸಲಾಗುತ್ತಿದೆ. ೨೦೧೦ರ ನವೆಂಬರ್‌ನಲ್ಲಿ ರಷ್ಯಾದ ಸೇಂಟ್ ಪೀಟರ್ಸ್‌ಬರ್ಗ್‌ನಲ್ಲಿ ನಡೆದ ಹುಲಿ ಶೃಂಗಸಭೆಯಲ್ಲಿ ಈ ದಿನವನ್ನು ಘೋಷಿಸಲಾಯಿತು. ಭಾರತ ಸೇರಿದಂತೆ ಹುಲಿಗಳ ಆವಾಸ ಹೊಂದಿರುವ ೧೩ ದೇಶಗಳ ನಾಯಕರು, ೨೦೨೨ರ ವೇಳೆಗೆ ವಿಶ್ವದ ಕಾಡು ಹುಲಿಗಳ ಸಂಖ್ಯೆಯನ್ನು ದ್ವಿಗುಣಗೊಳಿಸುವ ಮಹತ್ವಾಕಾಂಕ್ಷೆಯ ಟಿಎಕ್ಸ್-೨ ಗುರಿಯನ್ನು ಅಳವಡಿಸಿಕೊಂಡಿದ್ದರು. ೨೦೧೦ರಲ್ಲಿ ವಿಶ್ವದಲ್ಲಿ ಕೇವಲ ೩ ಸಾವಿರದ ೨೦೦ ಕಾಡು ಹುಲಿಗಳು ಮಾತ್ರ ಉಳಿದಿವೆ ಎಂದು ಅಂದಾಜಿಸಲಾಗಿತ್ತು. ಇತ್ತೀಚಿನ ಜಾಗತಿಕ ಅಂದಾಜಿನ ಪ್ರಕಾರ, ವಿಶ್ವದಲ್ಲಿ ಸುಮಾರು ೫ ಸಾವಿರದ ೭೧೧ ಕಾಡು ಹುಲಿಗಳಿದ್ದು, ಇದು ಸುಮಾರು ಶೇಕಡಾ ೭೪ರಷ್ಟು ಹೆಚ್ಚಳವಾಗಿದೆ. ವೈಜ್ಞಾನಿಕ ಆಧಾರಿತ ನೀತಿಗಳು ಹಾಗೂ ಬಲಿಷ್ಠ ಸಾಂಸ್ಥಿಕ ವ್ಯವಸ್ಥೆಯ

ಮೂಲಕ ಭಾರತ ಹುಲಿ ಸಂರಕ್ಷಣೆಯಲ್ಲಿ ಜಾಗತಿಕ ನಾಯಕನಾಗಿ ಹೊರಹೊಮ್ಮಿದೆ. ಪ್ರಸ್ತುತ ವಿಶ್ವದ ಸುಮಾರು ಶೇಕಡಾ ೭೦ರಷ್ಟು ಕಾಡು ಹುಲಿಗಳಿಗೆ ಭಾರತವೇ ನೆಲೆಯಾಗಿದೆ. ಪ್ರಕೃತಿಯೊಂದಿಗೆ ಸಾಮರಸ್ಯದಿಂದ ಬದುಕುವ ಭಾರತದ ಶತಮಾನಗಳ ಪರಂಪರೆ ಹಾಗೂ ಜನರ ಸಮೂಹಿಕ ಸಂಕಲ್ಪವೇ ದೇಶದ ಹುಲಿ ಸಂರಕ್ಷಣಾ ಪ್ರಯತ್ನಗಳಿಗೆ ಪ್ರೇರಣೆಯಾಗಿದೆ ಎಂದು ಪ್ರಧಾನಿ ಹೇಳಿದ್ದಾರೆ. ಭಾರತ, ಹುಲಿ ಸಂರಕ್ಷಣೆಯಲ್ಲಿ ಗಮನಾರ್ಹ ಯಶಸ್ಸು ಸಾಧಿಸಿದೆ. ಭಾರತ ಹುಲಿ ಸಂರಕ್ಷಣೆಯಲ್ಲಿ ಜಾಗತಿಕ ನಾಯಕನಾಗಿ ಉಳಿದಿದೆ ಎಂದು ಕೇಂದ್ರ ಅರಣ್ಯ ಮತ್ತು ಪರಿಸರ ಸಚಿವ ಭೂಪೇಂದ್ರ ಯಾದವ್ ಹೇಳಿದ್ದಾರೆ. ದೇಶದ ಕಾಡುಗಳೊಂದಿಗೆ ನಿಕಟ ಸಂಬಂಧ ಹೊಂದಿರುವ ಅರಣ್ಯ-ಅವಲಂಬಿತ ಸಮುದಾಯಗಳನ್ನು ಬೆಂಬಲಿಸುವಾಗ, ಹುಲಿಗಳು ಮತ್ತು ಅವುಗಳ ಪರಿಸರ ವ್ಯವಸ್ಥೆಗಳನ್ನು ರಕ್ಷಿಸಲು ಸರ್ಕಾರ ಬದ್ಧವಾಗಿದೆ ಎಂದು ಭೂಪೇಂದ್ರ ಯಾದವ್ ಹೇಳಿದ್ದಾರೆ.

<><><>

ಗುರು ಪೂರ್ಣಿಮೆ, ವ್ಯಾಸ ಪೂರ್ಣಿಮೆ ಎಂದೂ ಕರೆಯಲ್ಪಡುವ ಈ ಹಬ್ಬವನ್ನು ಇಂದು ದೇಶದಾದ್ಯಂತ ಭಕ್ತಿಭಾವದಿಂದ ಆಚರಿಸಲಾಗುತ್ತಿದೆ. ಈ ದಿನವನ್ನು ಆಧ್ಯಾತ್ಮಿಕ ಹಾಗೂ ಶೈಕ್ಷಣಿಕ ಗುರುಗಳಿಗೆ ಸಮರ್ಪಿಸಲಾಗಿದ್ದು, ತಮ್ಮ ಜ್ಞಾನ, ಮಾರ್ಗದರ್ಶನ ಮತ್ತು ಆಶೀರ್ವಾದಗಳಿಂದ ಜೀವನ ರೂಪಿಸಿದ ಗುರುಗಳನ್ನು ಸ್ಮರಿಸಿ ಕೃತಜ್ಞತೆ ಸಲ್ಲಿಸಲಾಗುತ್ತದೆ. ಬೌದ್ಧ ಸಂಪ್ರದಾಯದ ಪ್ರಕಾರ, ಜ್ಞಾನೋದಯ ಪಡೆದ ಬಳಿಕ ಭಗವಾನ್ ಬುದ್ಧರು ಇದೇ ದಿನ ಬೋಧಗಯಾದಿಂದ ಸಾರನಾಥಕ್ಕೆ ತೆರಳಿ, ತಮ್ಮ ಮೊದಲ ಧರ್ಮೋಪದೇಶವನ್ನು ನೀಡಿದ್ದರು. ಹೀಗಾಗಿ ಬೌದ್ಧ ಧರ್ಮದ ಅನುಯಾಯಿಗಳು ಈ ದಿನ ಭಗವಾನ್ ಬುದ್ಧರನ್ನು ಪೂಜಿಸಿ ಗೌರವ ಸಲ್ಲಿಸುತ್ತಾರೆ. ಗುರು ಪೂರ್ಣಿಮೆಯ ಪ್ರಯುಕ್ತ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಲೋಕಸಭಾಧ್ಯಕ್ಷ ಓಂ ಬಿರ್ಲಾ, ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಹಲವು ಗಣ್ಯರು ದೇಶದ ಜನತೆಗೆ ಸಾಮಾಜಿಕ ಮಾಧ್ಯಮದಲ್ಲಿ ಶುಭಾಶಯ ಕೋರಿದ್ದಾರೆ. ಗುರುಗಳು ಕೇವಲ ಜ್ಞಾನವನ್ನು ಬೋಧಿಸುವುದಲ್ಲದೆ, ತಮ್ಮ ಶಿಷ್ಯರಲ್ಲಿ ಸಕಾರಾತ್ಮಕ ಚೈತನ್ಯವನ್ನು ತುಂಬಿ, ಉದಾತ್ತ ಚಿಂತನೆಗಳು ಹಾಗೂ ಉತ್ತಮ ಸಂಸ್ಕಾರಗಳನ್ನು ಬೆಳೆಸುತ್ತಾರೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಗುರುಗಳ ಆದರ್ಶಗಳನ್ನು ತಮ್ಮ

ಜೀವನದ ಶಕ್ತಿಯನ್ನಾಗಿ ರೂಪಿಸಿಕೊಳ್ಳುವಂತೆ ದೇಶದ ಜನತೆಗೆ ಪ್ರಧಾನಿ ಕರೆ ನೀಡಿದ್ದಾರೆ. ಭಾರತೀಯ ಸಂಸ್ಕೃತಿಯಲ್ಲಿ ಗುರುಗಳಿಗೆ ಅತ್ಯುನ್ನತ ಸ್ಥಾನವಿದ್ದು, ಅವರು ಜ್ಞಾನದ ಅಮೃತವನ್ನು ನೀಡಿ ಶಿಷ್ಯರ ಜೀವನವನ್ನು ಸಮೃದ್ಧಗೊಳಿಸುತ್ತಾರೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

<><><><>

ಸಂತ ಶಿರೋಮಣಿ ಗುರು ರವಿದಾಸ್ ಮಹಾರಾಜರ ೬೫೦ ನೇ ಜನ್ಮ ವರ್ಷಾಚರಣೆಯನ್ನು ಗುರುತಿಸಲು ಗುರು ಪೂರ್ಣಿಮೆಯ ಜೊತೆಜೊತೆಯಲ್ಲಿ ಇಂದು ರಾಷ್ಟ್ರವ್ಯಾಪಿ 'ಶ್ರೀ ಗುರು ರವಿದಾಸ್ ಮಹಾರಾಜ್ ಸಂಕಲ್ಪ ಅಭಿಯಾನ'ವನ್ನು ಬಿಜೆಪಿ ಪ್ರಾರಂಭಿಸಲಿದೆ. ಈ ಅಭಿಯಾನವನ್ನು ಇಂದು ವಾರಣಾಸಿಯ ಸೀರ್ ಗೋವರ್ಧನಪುರದಲ್ಲಿರುವ ಸಂತ ರವಿದಾಸ್ ಅವರ ಜನ್ಮಸ್ಥಳದಲ್ಲಿ ಉದ್ಘಾಟಿಸಲಾಗುತ್ತಿದೆ. ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ಇಂದು ಸಂಜೆ ಸಂತ ರವಿದಾಸ್ ಅವರ ಜನ್ಮಸ್ಥಳಕ್ಕೆ ಭೇಟಿ ನೀಡಿ ನಮನ ಸಲ್ಲಿಸಲಿದ್ದಾರೆ. ಸುಮಾರು ೨೫ ಸಾವಿರ ಮಂದಿ ಈ ಸಂಕಲ್ಪ ಸಭೆಯಲ್ಲಿ ಪಾಲ್ಗೊಳ್ಳುತ್ತಿದ್ದಾರೆ. ಈ ಕಾರ್ಯಕ್ರಮಗಳ ಸರಣಿಯು ಬರುವ ವರ್ಷದ ಫೆಬ್ರವರಿ ೨೦ ರವರೆಗೆ ಮುಂದುವರಿಯಲಿದೆ. ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಬಿಜೆಪಿ ಅಧ್ಯಕ್ಷ ನಿತಿನ್ ನಬಿನ್, ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಉತ್ತರ ಪ್ರದೇಶದ ವಾರಣಾಸಿ ಉಸ್ತುವಾರಿ ಸಚಿವ ಸುರೇಶ್ ಖನ್ನಾ ಮತ್ತಿತರರು ಭಾಗವಹಿಸುವ ನಿರೀಕ್ಷೆಯಿದೆ.

<><><><>

ಪೇಟಿಎಂ ಪೇಮೆಂಟ್ ಬ್ಯಾಂಕ್ ಲಿಮಿಟೆಡ್ ನ ಕಾರ್ಯಾಚರಣೆಯನ್ನು ವಿಸರ್ಜಿಸುವ ಪ್ರಕ್ರಿಯೆಗೆ ಚಾಲನೆ ನೀಡಿರುವುದಾಗಿ ಭಾರತೀಯ ರಿಸರ್ವ್ ಬ್ಯಾಂಕ್- ಆರ್.ಬಿ.ಐ ತಿಳಿಸಿದೆ. ಈ ಪ್ರಕ್ರಿಯೆಯ ಅಧಿಕೃತ ಲಿಕ್ವಿಡೇಟರ್ ಆಗಿ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಮಾಜಿ ಮುಖ್ಯ ಪ್ರಬಂಧಕ ಗಿರಿಕುಮಾರ್ ನಾಯರ್ ಅವರನ್ನು ನೇಮಕ ಮಾಡಲಾಗಿದೆ. ದೆಹಲಿ ಹೈಕೋರ್ಟ್, ಬ್ಯಾಂಕಿಂಗ್ ನಿಯಂತ್ರಣ ಕಾಯ್ದೆ- ൧൯൪൯ ಹಾಗೂ ಕಂಪನಿಗಳ ಕಾಯ್ದೆ - ೨೦൧೩ರ ನಿಬಂಧನೆಗಳ ಅನ್ವಯ ಪೇಟಿಎಂ ಬ್ಯಾಂಕ್ ಅನ್ನು ವಿಸರ್ಜಿಸಲು ಅನುಮತಿ ನೀಡಿರುವ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಆರ್.ಬಿ.ಐ ತಿಳಿಸಿದೆ.

<><><><>

ಗ್ಲ್ಯಾಸ್ಗೋ ಕಾಮನ್ವೆಲ್ತ್ ಕ್ರೀಡಾಕೂಟದ ಪುರುಷರ ೧೦ ಸಾವಿರ ಮೀಟರ್ ಓಟದಲ್ಲಿ ಬೆಳ್ಳಿ ಪದಕ ಗೆದ್ದ ಗುಲ್ವೀರ್ ಸಿಂಗ್ ಅವರನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಅಭಿನಂದಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ರಾಷ್ಟ್ರಪತಿ ಅವರು, ಗುಲ್ವೀರ್ ಸಿಂಗ್ ಅವರ ಅದ್ಭುತ ಪ್ರದರ್ಶನವು, ಪುರುಷರ ೧೦ ಸಾವಿರ ಮೀಟರ್ ಓಟದಲ್ಲಿ ಭಾರತಕ್ಕೆ ಮೊದಲ ಕಾಮನ್‌ವೆಲ್ತ್ ಕ್ರೀಡಾಕೂಟದ ಪದಕ ತಂದುಕೊಟ್ಟಿದೆ ಎಂದು ತಿಳಿಸಿದ್ದಾರೆ. ಅವರ ಸಾಧನೆಯ ಬಗ್ಗೆ ದೇಶ ಹೆಮ್ಮೆಪಡುತ್ತದೆ ಮತ್ತು ಭವಿಷ್ಯದಲ್ಲಿ ಅವರಿಗೆ ಇನ್ನೂ ಅನೇಕ ಪ್ರಶಸ್ತಿಗಳು ಸಿಗಲಿ ಎಂದು ಹಾರೈಸಿದ್ದಾರೆ.

<><><><>

ಉಕ್ರೇನ್‌ನ ಕೈವ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯು, ಭಾರತೀಯ ನಾವಿಕರಿರುವ ಎಂವಿ ಅಮೀರ್-೧ ಹಡಗಿನ ಪರಿಸ್ಥಿತಿಗೆ ಅತ್ಯುನ್ನತ ಆದ್ಯತೆ ನೀಡಲಾಗಿದೆ ಎಂದು ತಿಳಿಸಿದೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ರಾಯಭಾರ ಕಚೇರಿ, ಹಡಗಿನಲ್ಲಿರುವ ಎಲ್ಲ ಭಾರತೀಯರ ಸುರಕ್ಷತೆ ಮತ್ತು ಭದ್ರತೆಯನ್ನು ಖಚಿತಪಡಿಸಿಕೊಳ್ಳಲು ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿರುವುದಾಗಿ ತಿಳಿಸಿದೆ.

<><><><>

ನೈಋತ್ಯ ಜಪಾನ್‌ನ ಕುಮಾಮೊಟೊದಲ್ಲಿ ನಿನ್ನೆ ಸಂಭವಿಸಿದ ಪ್ರಬಲ ಭೂಕಂಪದಲ್ಲಿ ೧೩ ಜನ ಸಾವನ್ನಪ್ಪಿದ್ದಾರೆ. ವಿದ್ಯುತ್ ಕಡಿತ, ಹಾನಿಗೊಳಗಾದ ಸಂಚಾರಿ ವ್ಯವಸ್ಥೆ ಅಸ್ತವ್ಯಸ್ತವಾಗಿದೆ. ಕ್ಯುಶು ಶಿಂಕನ್ಸೆನ್ ಬುಲೆಟ್ ರೈಲು ಮತ್ತು ಕೆಲವು ವಿಮಾನ ನಿಲ್ದಾಣ ಕಾರ್ಯಾಚರಣೆಗಳನ್ನು ಸ್ಥಗಿತಗೊಳಿಸಲಾಗಿದೆ. ತುರ್ತು ರಕ್ಷಣಾ ಕಾರ್ಯಾಚರಣೆ ಮುಂದುವರೆದಿದ್ದು, ತೀವ್ರ ಹಾನಿಗೊಳಗಾದ ಪ್ರದೇಶಗಳಲ್ಲಿ ರಕ್ಷಣಾ ಪ್ರಯತ್ನಗಳು ನಡೆಯುತ್ತಿವೆ ಎಂದು ಪ್ರಧಾನಿ ಸನೇ ತಕೈಚಿ ಹೇಳಿದ್ದಾರೆ. ೩೬ ಸಾವಿರದ ೬೦೦ ಕ್ಕೂ ಹೆಚ್ಚು ಮನೆಗಳು ಇನ್ನೂ ವಿದ್ಯುತ್ ಸಂಪರ್ಕ ಕಡಿತಗೊಂಡಿವೆ ಮತ್ತು ಕೆಲವು ಪ್ರದೇಶಗಳಲ್ಲಿ ಸಂವಹನ ಜಾಲಗಳು ಕಾರ್ಯನಿರ್ವಹಿಸುತ್ತಿಲ್ಲ.

<><><><>

ಒಂಟಾರಿಯೊದಲ್ಲಿ ನಡೆಯುತ್ತಿರುವ ವಿಶ್ವ ಜೂನಿಯರ್ ಸ್ಕ್ವಾಶ್ ಚಾಂಪಿಯನ್ ಶಿಪ್‌ನಲ್ಲಿ ಭಾರತದ ಪುರುಷರು ಮತ್ತು ಮಹಿಳೆಯರ ತಂಡ ಸೆಮಿಫೈನಲ್ಸ್ ಪ್ರವೇಶಿಸಿವೆ. ಐದನೇ ಶ್ರೇಯಾಂಕದ ಭಾರತೀಯ ಪುರುಷರ ತಂಡ ಕುವೈತ್ ವಿರುದ್ಧ ೨-೧ ಅಂತರದಿಂದ ಗೆಲುವು ಸಾಧಿಸಿತು. ಮಹಿಳಾ ತಂಡ, ದಕ್ಷಿಣ ಆಫ್ರಿಕಾ ವಿರುದ್ಧ ೩-೦ ಅಂತರದ ಜಯಗಳಿಸಿತು.